ಪ್ರ-72-(92)

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಕಂದಾಯ ಸಚಿವರ ಹೇಳಿಕೆ:**

ಬೆಳಗಾವಿ ಜಿಲ್ಲೆಯಲ್ಲಿ ನೂತನ ತಾಲ್ಲೂಕುಗಳಾಗಿ ರಚಿಸಲಾದ ನಿಪ್ಪಾಣಿ, ಕಿತ್ತೂರು, ಮೂಡಲಗಿ ಮತ್ತು ಯರಗಟ್ಟಿ ತಾಲ್ಲೂಕುಗಳಲ್ಲಿ ಮುಲಭೂತ ಸೌಕರ್ಯಗಳಿಲ್ಲದೆ, ಅಗತ್ಯ ಸಿಬ್ಬಂದಿಗಳಿಲ್ಲದೆ ಸಾರ್ವಜನಿಕರು ಕೆಲಸ ಕಾರ್ಯಗಳಿಗೆ ಅಲೆದಾಡುತ್ತಾ ತುಂಬಾ ತೊಂದರೆ ಅನುಭವಿಸುತ್ತಿರುವ ವಿಚಾರವಾಗಿ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯ ಬಯಸುತ್ತೇನೆ.

*********

ಬೆಳಗಾವಿ ಜಿಲ್ಲೆಯಲ್ಲಿ ಹೊಸದಾಗಿ ರಚನೆಯಾದ ಕಿತ್ತೂರು ತಾಲ್ಲೂಕಿನಲ್ಲಿ ಎಲ್ಲಾ ತಾಲ್ಲೂಕು ಮಟ್ಟದ ಕಛೇರಿಗಳು ಒಂದೇ ಸೂರಿನಡಿ ಕಾರ್ಯ ನಿರ್ವಹಿಸಲು ಅನುಕೂಲವಾಗುವಂತೆ ತಾಲ್ಲೂಕು ಆಡಳಿತ ಸೌಧವನ್ನು ರೂ. 10.00 ಕೋಟಿಗಳ ಅಂದಾಜು ಮೊತ್ತದಲ್ಲಿ ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡಿದ್ದು ಪ್ರಸ್ತುತ ಕಾಮಗಾರಿಯು ಮುಕ್ತಾಯ ಹಂತದಲ್ಲಿದೆ.

ಜಿಲ್ಲಾಧಿಕಾರಿಗಳು ನಿಪ್ಪಾಣಿ ಮತ್ತು ಮೂಡಲಗಿ ತಾಲ್ಲೂಕಿನಲ್ಲಿ ಹೊಸದಾಗಿ ತಾಲ್ಲೂಕು ಆಡಳಿತ ಸೌಧವನ್ನು ನಿರ್ಮಿಸಲು ಜಮೀನು ಮಂಜೂರು ಪ್ರಕ್ರಿಯೆ ಜಾರಿಯಲ್ಲಿದ್ದು,ಜಮೀನು ಮಂಜೂರಾದ ನಂತರ ಜಿಲ್ಲಾಧಿಕಾರಿ ಬೆಳಗಾವಿ ಇವರಿಂದ ಪ್ರಸ್ತಾವನೆ ಪಡೆದು ಆಡಳಿತಾತ್ಮಕ ಅನುಮೋದನೆ ನೀಡಲು ಕ್ರಮ ವಹಿಸಲಾಗುವುದು.

ಯರಗಟ್ಟಿ ತಾಲ್ಲೂಕನ್ನು ನೂತನ ತಾಲ್ಲೂಕಾಗಿ ಪ್ರಾಥಮಿಕ ಅಧಿಸೂಚನೆ ಹೊರಡಿಸಿದ್ದು ಅಂತಿಮ ಅಧಿಸೂಚನೆ ಹೊರಡಿಸಿದ ನಂತರ ತಾಲ್ಲೂಕಿಗೆ ಮೂಲಭೂತ ಸೌಕರ್ಯ ಮತ್ತು ಅಗತ್ಯ ಸಿಬ್ಬಂದಿಗಳನ್ನು ಒದಗಿಸಲು ಕ್ರಮವಹಿಸಲಾಗುವುದು.

ಪ್ರತಿ ತಾಲ್ಲೂಕಿಗೆ ಮೂಲಭೂತ ಸೌಕರ್ಯಗಳಿಗಾಗಿ ಪ್ರತಿ ವರ್ಷ ರೂ. 5.00 ಲಕ್ಷಗಳಂತೆ ಅನುದಾನ ಬಿಡುಗಡೆ ಮಾಡಲಾಗುತ್ತಿದೆ.

ಹೊಸದಾಗಿ ರಚನೆಯಾದ ತಾಲ್ಲೂಕುಗಳಲ್ಲಿ ತಾಲ್ಲೂಕು ಪಂಚಾಯಿತಿ, ನೀರಾವರಿ ಇಲಾಖೆ, ಸಣ್ಣ ನೀರಾವರಿ ಇಲಾಖೆ ಪೋಲೀಸ್ ಇಲಾಖೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಮತ್ತು ಶಿಶು ಅಭಿವೃದ್ಧಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳು ಕಾರ್ಯ ನಿರ್ವಹಿಸುತ್ತಿವೆ.ಅಧಿಕಾರಿ/ಸಿಬ್ಬಂದಿಗಳ ವಿವರಗಳು ಈ ಕೆಳಕಂಡಂತಿವೆ;

| ಕ್ರ.ಸಂ. | ತಾಲ್ಲೂಕು | ವೃಂದ-ಎ | ವೃಂದ-ಬಿ | ವೃಂದ-ಸಿ | ವೃಂದ-ಡಿ |
|---|---|---|---|---|---|
| 1 | ಕಿತ್ತೂರು | - | 4 | 11 | 2 |
| 2 | ನಿಪ್ಪಾಣಿ | 3 | 2 | 35 | 4 |
| 3 | ಮೂಡಲಗಿ | 02 | 30 | 1263 | 32 |

ನೂತನವಾಗಿ ಘೋಷಣೆಯಾದ ಯರಗಟ್ಟಿ ತಾಲ್ಲೂಕಿನಲ್ಲಿ ಗ್ರೇಡ್-1 ತಹಶೀಲ್ದಾರ್ ರವರು ಮಾತ್ರ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.

**ಕಂಇ 152 ಡಬ್ಲ್ಯೂಬಿಆರ್ 2021**

**(ಆರ್. ಅಶೋಕ)**
ಕಂದಾಯ ಸಚಿವರು